# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ ಮೈಸೂರು

ವಿಷಯ: 2019–20ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆಹ್ವಾನಿಸುವ ಬಗ್ಗೆ.

ಉಲ್ಲೇಖ: 1. ದಿನಾಂಕ 28.06.2019ರ ಸಿಂಡಿಕೇಟ್ ಸಭೆಯ ತೀರ್ಮಾನ.
2. ವಿ.ವಿ.ಆದೇಶ ಸಂಖ್ಯೆ ಇಟಿ.11/89/2019–20 ದಿನಾಂಕ 12.7.2019
3. ವಿಶ್ವವಿದ್ಯಾನಿಲಯದ ಅಧಿಸೂಚನೆ ಸಂಖ್ಯೆ:ಇಟಿ–11/28/2019–20, ದಿನಾಂಕ:16.08.2019.
4. ಅಧ್ಯಕ್ಷರು, ವ್ಯವಹಾರ ಆಡಳಿತ ಅಧ್ಯಯನ ವಿಭಾಗ, ಮಾ.ಗಂ. ಮೈಸೂರು, ಇವರ ಪತ್ರ ಸಂಖ್ಯೆ ಎಂಬಿಎ/291/19–20 ದಿನಾಂಕ 23.08.2019.
5. ದಿನಾಂಕ:25.08.2019ರಂದು ನಡೆದ ಆಯ್ಕೆ ಸಮಿತಿ ಸಭೆಯ ನಡಾವಳಿ.

** * **

## ಆದೇಶ ಸಂಖ್ಯೆ: ಇಟಿ9/263/2018–19 ದಿನಾಂಕ 30ನೇ ಆಗಸ್ಟ್ 2019.

ದಿನಾಂಕ 28.06.2019ರಂದು ನಡೆದ ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸಭೆಯ ತೀರ್ಮಾನದನ್ವಯ ಹಾಗೂ ಮಾನ್ಯ ಕುಲಪತಿಯವರ ಅನುಮೋದನೆಯ ಮೇರೆಗೆ, 2019–20ನೇ ಶೈಕ್ಷಣಿಕ ಸಾಲಿನಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗಗಳಲ್ಲಿ ವಿದ್ಯಾರ್ಥಿಗಳಿಗೆ ಹೆಚ್ಚುವರಿ ಬೋಧನಾ ಕಾರ್ಯ ನಿರ್ವಹಿಸಲು ಈ ಕೆಳಕಂಡ ಅತಿಥಿ ಉಪನ್ಯಾಸಕರನ್ನು ಆಹ್ವಾನಿಸಲಾಗಿದೆ.

| ಕ್ರಮ ಸಂಖ್ಯೆ | ಅತಿಥಿ ಉಪನ್ಯಾಸಕರ ಹೆಸರು | ವಿಷಯ | ವಾರಕ್ಕೆ ಒಟ್ಟು ಬೋಧನಾ (ಥಿಯರಿ / ಪ್ರಾಕ್ಟಿಕಲ್) ಕಾರ್ಯ (ಗಂಟೆಗಳಲ್ಲಿ) * | ಸ್ನಾತಕೋತ್ತರ ವಿಭಾಗ / ಸ್ನಾತಕೋತ್ತರ ಕೇಂದ್ರ / ಘಟಕ ಕಾಲೇಜು | ಮಾಹೆಯಾನ ಸಂಭಾವನೆ ರೂ.ಗಳಲ್ಲಿ |
|---|---|---|---|---|---|
| 01. | ಡಾ. ನಿಶ್ಚಿತ್ ಎಸ್. #672/ಎ, 12ನೇ ಮೇನ್, ಟಿ.ಕೆ.ಲೇಔಟ್, ಮೈಸೂರು. | ಎಂಬಿಎ | 12 | ವ್ಯವಹಾರ ಆಡಳಿತ ಅಧ್ಯಯನ ವಿಭಾಗ, ಮಾ.ಗಂ. ಮೈಸೂರು | 22,500/- |

* ಬೋಧನಾ ವಿಷಯ, ಥಿಯರಿ/ಪ್ರಾಕ್ಟಿಕಲ್ ಕಾರ್ಯದ ಬಗ್ಗೆ ಸಂಬಂಧಿಸಿದ ವಿಭಾಗದ ಅಧ್ಯಕ್ಷರು ಹಂಚಿಕೆ ಮಾಡುವರು. **ಎರಡು ಪ್ರಾಯೋಗಿಕ ಬೋಧನಾ ಕಾರ್ಯವು ಒಂದು ಥಿಯರಿ ಬೋಧನಾ ಕಾರ್ಯಕ್ಕೆ ಸಮಾನವಾಗಿರುತ್ತದೆ.**

ಆಹ್ವಾನಿತ ಅತಿಥಿ ಉಪನ್ಯಾಸಕರು ಈ ಆದೇಶ ತಲುಪಿದ 7 ದಿನಗಳೊಳಗೆ ಸಂಬಂಧಪಟ್ಟ ಅಧ್ಯಯನ ವಿಭಾಗದ ಅಧ್ಯಕ್ಷರಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳತಕ್ಕದ್ದು. ತಪ್ಪಿದಲ್ಲಿ ಈ ಆದೇಶವು ರದ್ದಾಗುತ್ತದೆ.

ಈ ವೆಚ್ಚವನ್ನು ಆಯವ್ಯಯ ಅಂದಾಜುಗಳ "ವೇತನ ಮತ್ತು ಭತ್ಯೆಗಳು" ಖಾತೆಯ "ತಾತ್ಕಾಲಿಕ ಅಧ್ಯಾಪಕರ ವೇತನ" (ಕೋಡ್ 228) ಶೀರ್ಷಿಕೆಯಿಂದ ಭರಿಸಬಹುದಾಗಿದೆ.

ಷರತ್ತುಗಳು:

ಅ. ಪ್ರತಿ ವಾರದಲ್ಲಿ 12 ಗಂಟೆಗಳ ಬೋಧನಾ ಕಾರ್ಯನಿರ್ವಹಿಸಲು ಆಹ್ವಾನಿತವಾಗಿರುವ ಅತಿಥಿ ಉಪನ್ಯಾಸಕರುಗಳು ಪ್ರತಿದಿನ ಅಧ್ಯಯನ ವಿಭಾಗದ ಕೆಲಸದ ಪೂರ್ಣಾವಧಿಯಲ್ಲಿ ಕಡ್ಡಾಯವಾಗಿ ಉಪಸ್ಥಿತರಿದ್ದು, ವಿದ್ಯಾರ್ಥಿಗಳ ಮಾರ್ಗದರ್ಶನಕ್ಕೆ ಲಭ್ಯವಿರಬೇಕು ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ ಕಾಶಿಇ/44/ಅಉನೇ/2012–13ನೇ ಪಾವಿ–1, ದಿನಾಂಕ 02.7.2013ರ ಪ್ರಕಾರ ಕಾರ್ಯ ನಿರ್ವಹಿಸಬೇಕಾಗಿರುತ್ತದೆ.

ಆ. ಅತಿಥಿ ಉಪನ್ಯಾಸಕರು ಪ್ರತಿ ಮಾಹೆಯಲ್ಲಿ ಒಂದು ದಿನ ಸಾಂದರ್ಭಿಕ ರಜೆಯನ್ನು ಪಡೆಯಲು ಅರ್ಹರಿರುತ್ತಾರೆ ಮತ್ತು ಈ ರಜೆ ಅವಧಿಯ ಬೋಧನಾ ಕಾರ್ಯಭಾರವನ್ನು ಮುಂದಿನ ಮಾಹೆಯೊಳಗೆ ಸರಿದೂಗಿಸುವುದು.

ಇ. ಹಂಚಿಕೆಯಾಗಿರುವ ಬೋಧನಾ ತರಗತಿಗಳನ್ನು ತೆಗೆದುಕೊಳ್ಳಲು ವಿಫಲರಾದಲ್ಲಿ, ಗೈರುಹಾಜರಾದ ದಿನದ ಸಂಭಾವನೆಯನ್ನು ಕಡಿತಗೊಳಿಸಲಾಗುವುದು.

12/9